## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ನಕಲಿ ಅಂಕಪಟ್ಟಿ ಹಾವಳಿಯನ್ನು ತಪ್ಪಿಸುವ ದೃಷ್ಟಿಯಿಂದ ರಾಜ್ಯದ ಎಲ್ಲಾ ಉನ್ನತ ಶಿಕ್ಷಣದ ವಿಧ್ಯಾರ್ಥಿಗಳು Academic Bank of Credits ನಲ್ಲಿ ನೊಂದಾಯಿಸಿಕೊಂಡು ಹಾಗೂ ನೇಮಕಾತಿಯಲ್ಲಿ NAD/Digilocker ನಲ್ಲಿನ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳನ್ನು ದೃಡೀಕೃತವೆಂದು ಪರಿಗಣಿಸುವ ಬಗ್ಗೆ - ಆದೇಶ.

**ಓದಲಾಗಿದೆ:**

1. ಕಾರ್ಯದರ್ಶಿ, ವಿಶ್ವವಿದ್ಯಾಲಯಗಳ ಹಣಕಾಸು ಆಯೋಗ ಇವರ ಅ.ಸ. ಪತ್ರ ಸಂಖ್ಯೆ: 1-46/2020(NAD/Digilocker), ದಿನಾಂಕ: 30-06-2020
2. ಕಾರ್ಯದರ್ಶಿ, ವಿಶ್ವವಿದ್ಯಾಲಯಗಳ ಹಣಕಾಸು ಆಯೋಗ ಇವರ ಅ.ಸ. ಪತ್ರ ಸಂಖ್ಯೆ:1-46/2020(NAD/Digilocker), ದಿನಾಂಕ:14-07-2021
3. ಕಾರ್ಯದರ್ಶಿ, ವಿಶ್ವವಿದ್ಯಾಲಯಗಳ ಹಣಕಾಸು ಆಯೋಗ ಇವರ ಅ.ಸ. ಪತ್ರ ಸಂಖ್ಯೆ: 1-46/2020(NAD/Digilocker), ದಿನಾಂಕ: 03-01-2022
4. ಕಾರ್ಯದರ್ಶಿ, ವಿಶ್ವವಿದ್ಯಾಲಯಗಳ ಹಣಕಾಸು ಆಯೋಗ ಇವರ ಅ.ಸ. ಪತ್ರ ಸಂಖ್ಯೆ: 1-46/2020(NAD/Digilocker), ದಿನಾಂಕ:12-09-2022.
5. ಕಾರ್ಯದರ್ಶಿ, ವಿಶ್ವವಿದ್ಯಾಲಯಗಳ ಹಣಕಾಸು ಆಯೋಗ ಇವರ ಅ.ಸ. ಪತ್ರ ಸಂಖ್ಯೆ: 1-1/2022 (ABC), ದಿನಾಂಕ: 13-05-2022
6. ಕಾರ್ಯದರ್ಶಿ, ವಿಶ್ವವಿದ್ಯಾಲಯಗಳ ಹಣಕಾಸು ಆಯೋಗ ಇವರ ಅ.ಸ. ಪತ್ರ ಸಂಖ್ಯೆ: 1-50/2021 (ABC/NAD), ದಿನಾಂಕ: 21-02-2023

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ಮತ್ತು (2) ರ ಶಿಕ್ಷಣ ಕ್ಷೇತ್ರದಲ್ಲಿ ಆಡಳಿತಾತ್ಮಕ ಮತ್ತು ಶೈಕ್ಷಣಿಕ ಸುಧಾರಣೆಗಳನ್ನು ತರಲು ಹಾಗೂ ಮಾಹಿತಿ ತಂತ್ರಜ್ಞಾನದ ಬಳಕೆಯ ಮೂಲಕ ಸಮರ್ಥ ಸೇವೆಗಳನ್ನು ತಲುಪಿಸಲು ಭಾರತ ಸರ್ಕಾರವು ಶೈಕ್ಷಣಿಕ ಪ್ರಶಸ್ತಿಗಳ ಡಿಜಿಟಲ್ ಡಿಪಾಸಿಟರಿಯ NAD ಸ್ಥಾಪಿಸಲಾಗಿರುತ್ತದೆ.

NAD ಪ್ರಾರಂಭವಾದಾಗಿನಿಂದ, ವಿವಿಧ ಕೇಂದ್ರೀಯ ವಿಶ್ವವಿದ್ಯಾಲಯಗಳು, ರಾಜ್ಯ ವಿಶ್ವವಿದ್ಯಾಲಯಗಳು, ಖಾಸಗಿ ವಿಶ್ವವಿದ್ಯಾಲಯಗಳು, ಕೇಂದ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳು, ಶಾಲಾ ಮಂಡಳಿಗಳು ಸೇರಿದಂತೆ ಅನೇಕ ಶೈಕ್ಷಣಿಕ ಸಂಸ್ಥೆಗಳು NAD ನಲ್ಲಿ ತಮ್ಮ ಶೈಕ್ಷಣಿಕ ಪ್ರಶಸ್ತಿಗಳನ್ನು ಅಪ್‌ಲೋಡ್ ಮಾಡುತ್ತಿವೆ. ಅನೇಕ ಬಳಕೆದಾರರು ತಮ್ಮ ಶೈಕ್ಷಣಿಕ ಪ್ರಶಸ್ತಿಗಳನ್ನು ಆನ್‌ಲೈನ್‌ನಲ್ಲಿ ಪಡೆಯಲು ಡಿಜಿಲಾಕರ್ ಮೂಲಕ NAD ಸೇವೆಗಳನ್ನು ಬಳಸುತ್ತಿದ್ದಾರೆ ಮತ್ತು ಪರಿಶೀಲನೆ ಬಯಸುವ ಘಟಕಗಳು ಶೈಕ್ಷಣಿಕ ಪ್ರಶಸ್ತಿಗಳ ಪರಿಶೀಲನೆಗಾಗಿ ಡಿಜಿಲಾಕರ್ ಮೂಲಕ NAD ಸೇವೆಗಳನ್ನು ಬಳಸುವ ಕುರಿತು UGCಯು ವಿಶ್ವವಿದ್ಯಾಲಯಗಳಿಗೆ, ಶೈಕ್ಷಣಿಕ ಸಂಸ್ಥೆಗಳಿಗೆ ಹಾಗೂ ಎಲ್ಲಾ ಸಂಬಂಧಪಟ್ಟ ಪಾಲುದಾರರಿಗೆ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ಮತ್ತು (4) ರಲ್ಲಿ ವಿಶ್ವವಿದ್ಯಾಲಯಗಳ ಹಣಕಾಸು ಆಯೋಗದ ಅ.ಸ. ಪತ್ರಗಳಲ್ಲಿ ಭಾರತ ಸರ್ಕಾರದ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ಡಿಜಿಲಾಕರ್ ತಂತ್ರಾಂಶವು ಮೂಲ ವಿತರಕರಿಂದ ಡಿಜಿಲಾಕರ್ NAD ಪ್ಲಾಟ್‌ಫಾರ್ಮ್ ಮೂಲಕ ಅಪ್‌ಲೋಡ್ ಮಾಡಿದ ನಂತರ, ಎಲೆಕ್ಟ್ರಾನಿಕ್ ರೂಪದಲ್ಲಿ ನೀಡಲಾದ ವಿದ್ಯಾರ್ಥಿಯ ಶೈಕ್ಷಣಿಕ ದಾಖಲೆಗಳನ್ನು ಸೆಳೆಯುವ ಸೌಲಭ್ಯವನ್ನು ಹೊಂದಿದೆ. ಡಿಜಿಲಾಕರ್ ಪ್ಲಾಟ್‌ಫಾರ್ಮ್‌ನಲ್ಲಿ ಲಭ್ಯವಿರುವ ಮೂಲ ದಾಖಲೆಗಳು ಮಾಹಿತಿ ತಂತ್ರಜ್ಞಾನ ಕಾಯ್ದೆ-2020 ರ ನಿಬಂಧನೆಯ ಪ್ರಕಾರ ಮಾನ್ಯವಾದ ದಾಖಲೆಗಳಾಗಿರುತ್ತವೆ ಹಾಗೂ ಡಿಜಿಲಾಕರ್ ಖಾತೆಗಳಲ್ಲಿ ನೀಡಲಾದ ದಾಖಲೆಗಳಲ್ಲಿ ಲಭ್ಯವಿರುವ ಪದವಿಗಳ ಅಂಕ ಪಟ್ಟಿಗಳು, ಪ್ರಮಾಣ ಪತ್ರಗಳು ಮತ್ತು ಇತರ ಶೈಕ್ಷಣಿಕ ದಾಖಲೆಗಳನ್ನು ದೃಢೀಕೃತ ದಾಖಲೆಗಳಾಗಿ ಸ್ವೀಕರಿಸಲು ಉನ್ನತ ಶಿಕ್ಷಣ ಸಂಸ್ಥೆಗಳಿಗೆ ತಿಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (5) & (6) ರಲ್ಲಿ ವಿಶ್ವವಿದ್ಯಾಲಯಗಳ ಹಣಕಾಸು ಆಯೋಗದ ಅ.ಸ. ಪತ್ರಗಳಲ್ಲಿ NEP-2020 ಅಡಿಯಲ್ಲಿ ಭಾರತ ಸರ್ಕಾರವು ಅಕಾಡೆಮಿಕ್ ಬ್ಯಾಂಕ್ ಆಫ್ ಕ್ರೆಡಿಟ್ ಸ್ಕೀಮ್ (ABC) ಅನ್ನು ಪ್ರಾರಂಭಿಸಿದೆ. ABC ಯು ವಿದ್ಯಾರ್ಥಿಗಳು ಪದವಿ ಮತ್ತು ಸ್ನಾತಕೋತ್ತರ ಅಧ್ಯಯನದ ಅವಧಿಯಲ್ಲಿ ಗಳಿಸಿದ Credit ಗಳನ್ನು ಶೇಖರಿಸುವ, ವಿದ್ಯಾರ್ಥಿಗಳು ಸಂಸ್ಥೆಯಿಂದ ವರ್ಗಾವಣೆಗೊಂಡಾಗ Credit ವರ್ಗಾಯಿಸುವ ಮತ್ತು ಅವಶ್ಯವಿದ್ದಾಗ ಗಳಿಸಿದ Creditಗಳನ್ನು ಪದವಿಗಳನ್ನು ಪಡೆಯಲು ನಗದೀಕರಿಸುವ ವ್ಯವಸ್ಥೆಯಾಗಿರುತ್ತದೆ. ಸದರಿ ವರ್ಗಾವಣೆಯಿಂದ ವಿದ್ಯಾರ್ಥಿಗಳು ಅಧ್ಯಯನವನ್ನು ಮೊಟಕುಗೊಳಿಸದೇ ಅನುಕೂಲವಾದಾಗ ಮುಂದುವರೆಸುವುದರಿಂದ ರಾಜ್ಯದ GER ಅನ್ನು ವೃದ್ಧಿಸುವುದರ ಜೊತೆಗೆ ಡ್ರಾಪ್ ಔಟ್ ಅನುಪಾತವನ್ನು ನಿಯಂತ್ರಿಸಬಹುದಾಗಿದೆ. ಆದ್ದರಿಂದ, ಶೈಕ್ಷಣಿಕ ಸಂಸ್ಥೆಗಳು NAD ಮೂಲಕ ABC ಅಡಿಯಲ್ಲಿ ನೋಂದಾಯಿಸಿಕೊಳ್ಳಬೇಕೆಂದು ತಿಳಿಸಲಾಗಿದೆ.

ಮುಂದುವರೆದು, ರಾಜ್ಯ ಸರ್ಕಾರವು 2023-24ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ ಸಂಖ್ಯೆ-99ರಲ್ಲಿ " **ನಕಲಿ ಅಂಕ ಪಟ್ಟಿ ಹಾವಳಿಯನ್ನು ತಪ್ಪಿಸುವ ದೃಷ್ಟಿಯಿಂದ ರಾಜ್ಯದ ಎಲ್ಲಾ ಉನ್ನತ ಶಿಕ್ಷಣದ ವಿದ್ಯಾರ್ಥಿಗಳು ಅಕಾಡೆಮಿಕ್ ಬ್ಯಾಂಕ್ ಆಫ್ ಕ್ರೆಡಿಟ್ ನಲ್ಲಿ ನೊಂದಾಯಿಸಿಕೊಂಡು ಹಾಗೂ ನೇಮಕಾತಿಯಲ್ಲಿ NAD/Digilocker ನಲ್ಲಿನ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರವನ್ನು ಕಡ್ಡಾಯಗೊಳಿಸಲು ಕ್ರಮ ಕೈಗೊಳ್ಳಲಾಗುವುದು**" ಎಂದು ಘೋಷಿಸಲಾಗಿರುತ್ತದೆ.

ಪ್ರಸ್ತುತ ಉನ್ನತ ಶಿಕ್ಷಣ ಇಲಾಖೆಯಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ ಅಂಕ ಪಟ್ಟಿಗಳು, ಪ್ರಮಾಣ ಪತ್ರಗಳು ಮತ್ತು ಇತರ ಶೈಕ್ಷಣಿಕ ದಾಖಲೆಗಳನ್ನು ಉನ್ನತ ಶಿಕ್ಷಣ ಇಲಾಖೆಯ UUCMS ತಂತ್ರಾಂಶದ ಮುಖಾಂತರ NAD-Digilocker ನಲ್ಲಿ ಸಂಗ್ರಹಿಸುವ ವ್ಯವಸ್ಥೆಯನ್ನು ಜಾರಿಗೊಳಿಸಲು ಕ್ರಮಕೈಗೊಳ್ಳಲಾಗಿದ್ದರೂ, ಎಲ್ಲಾ ವಿಶ್ವವಿದ್ಯಾಲಯಗಳು ಈ ಹಿಂದಿನ ವರ್ಷಗಳ ಎಲ್ಲಾ ಅಂಕ ಪಟ್ಟಿಗಳು ಮತ್ತು ಇತರ ಶೈಕ್ಷಣಿಕ ದಾಖಲೆಗಳನ್ನು ಸಂಪೂರ್ಣವಾಗಿ NAD-Digilocker ನಲ್ಲಿ ಅಳವಡಿಸಿರುವುದಿಲ್ಲ ಮತ್ತು ನೇಮಕಾತಿ ಪ್ರಾಧಿಕಾರಗಳಲ್ಲಿ ಹಾಗೂ ಖಾಸಗಿ ಸಂಸ್ಥೆಗಳಲ್ಲಿ Digilocker ಅಂಕಪಟ್ಟಿಯನ್ನು ಪರಿಗಣಿಸುವ ವ್ಯವಸ್ಥೆಯು ಅನುಷ್ಠಾನಗೊಂಡಿರುವುದಿಲ್ಲ. ಹಾಗೂ ವಿದ್ಯಾರ್ಥಿಗಳು ಮತ್ತು ಪಾಲುದಾರರು Digilocker ಅಂಕಪಟ್ಟಿಗಳ ಬಳಕೆಗೆ ಸಂಪೂರ್ಣ ಹೊಂದಿಕೊಂಡಿರುವುದಿಲ್ಲ.

ಈ ಹಿನ್ನಲೆಯಲ್ಲಿ, ಪ್ರಾರಂಭಿಕವಾಗಿ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಅಧ್ಯಯನ ಮಾಡುವ ವಿದ್ಯಾರ್ಥಿಗಳ ಎಲ್ಲಾ ಪದವಿ ಮತ್ತು ಸ್ನಾತಕೋತ್ತರ ಪದವಿ ಅಂಕ ಪಟ್ಟಿಗಳು, ಪ್ರಮಾಣ ಪತ್ರಗಳು ಮತ್ತು ಇತರ ಶೈಕ್ಷಣಿಕ ದಾಖಲೆಗಳನ್ನು Digital ರೂಪದಲ್ಲಿ NAD-Digilocker ನಲ್ಲಿ ಸಂಗ್ರಹಿಸಿ, ಮತ್ತು ವಿದ್ಯಾರ್ಥಿಗಳು ಪಡೆದಿರುವ Creditಗಳನ್ನು Academic Bank of Credits (ABC) ನಲ್ಲಿ ಕಡ್ಡಾಯವಾಗಿ ನೊಂದಾಯಿಸಿ ಸಂಗ್ರಹಿಸಲು ಹಾಗೂ ನೇಮಕಾತಿ ಪ್ರಾಧಿಕಾರಗಳು/ಸಂಸ್ಥೆಗಳು ನೇಮಕಾತಿ ಸಮಯದಲ್ಲಿ NAD-Digilocker ನಲ್ಲಿನ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳನ್ನು ದೃಢೀಕೃತವೆಂದು

ಪರಿಗಣಿಸುವಂತೆ. ತದನಂತರದ ದಿನಗಳಲ್ಲಿ ನೇಮಕಾತಿಯಲ್ಲಿ NAD/Digilocker ನಲ್ಲಿನ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳನ್ನು ಅಧಿಕೃತವೆಂದು ಪರಿಗಣಿಸಲು ತಿಳಿಸಲು ನಿರ್ಧರಿಸಲಾಗಿದೆ.

ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 29 EGOV 2023**

**ಬೆಂಗಳೂರು, ದಿನಾಂಕ:16.10.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು, 2023-24ನೇ ಶೈಕ್ಷಣಿಕ ಸಾಲಿನಿಂದ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿನ ಅಧೀನ ಇಲಾಖೆಗಳು, ಸಾರ್ವಜನಿಕ ವಿಶ್ವವಿದ್ಯಾಲಯಗಳು ಹಾಗೂ ಎಲ್ಲಾ ಶೈಕ್ಷಣಿಕ ಸಂಸ್ಥೆಗಳು ಪದವಿ ಮತ್ತು ಸ್ನಾತಕೋತ್ತರ ಪದವಿ ಅಂಕ ಪಟ್ಟಿಗಳು, ಪ್ರಮಾಣ ಪತ್ರಗಳು ಮತ್ತು ಇತರ ಶೈಕ್ಷಣಿಕ ದಾಖಲೆಗಳನ್ನು NAD-Digilocker ನಲ್ಲಿ ಡಿಜಿಟಲ್ ರೂಪದಲ್ಲಿ ಕಡ್ಡಾಯವಾಗಿ ಸಂಗ್ರಹಿಸಿಡಲು, ಉನ್ನತ ಶಿಕ್ಷಣದ ವಿದ್ಯಾರ್ಥಿಗಳು ಸದರಿ ಅಂಕಪಟ್ಟಿಗಳ credits ಗಳನ್ನು ಅಕಾಡೆಮಿಕ್ ಬ್ಯಾಂಕ್ ಆಫ್ ಕ್ರೆಡಿಟ್ (ABC)ನಲ್ಲಿ ಕಡ್ಡಾಯವಾಗಿ ನೊಂದಾಯಿಸಿಕೊಳ್ಳಲು ಆದೇಶಿಸಿದೆ. ವಿವಿಧ ನೇಮಕಾತಿ ಪ್ರಾಧಿಕಾರಗಳು/ಸಂಸ್ಥೆಗಳು ನೇಮಕಾತಿ ಸಮಯದಲ್ಲಿ NAD-Digilocker ನಲ್ಲಿನ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳನ್ನು ದೃಢೀಕೃತವೆಂದು ಪರಿಗಣಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ನಂದಕುಮಾರ್ ಬಿ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)

**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ : ಕಾಶಿಇ/ಶೈವಿ/83/ಪರಿಚಲನಾ ಆದೇಶ/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು - 560001.
ದಿನಾಂಕ: 07.11.2023.

**ಪರಿಚಲನಾ ಆದೇಶ**

ಸರ್ಕಾರದ ಆದೇಶ ಸಂಖ್ಯೆ : ಇಡಿ 29 EGOV 2023, ದಿನಾಂಕ : 16.10.2023 ನ್ನು ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ : (ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ)**

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ – ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ – ಸೂಕ್ತ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.

ಪ್ರತಿಯನ್ನು :

1) ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ಎಲ್ಲಾ ಅಧಿಕಾರಿಗಳ ಆಪ್ತ ಶಾಖೆಗೆ – ಮಾಹಿತಿಗಾಗಿ.
2) ಕಛೇರಿ ಪ್ರತಿ.